## ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಅರ್ಜಿ ಸಲ್ಲಿಸಲು ಪಾಲಿಸಬೇಕಾದ ಸೂಚನೆಗಳು

1) ಒಂದು ಕುಟುಂಬದಿಂದ ಒಬ್ಬ ವಿದ್ಯಾರ್ಥಿಗೆ ಮಾತ್ರ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯಕ್ಕಾಗಿ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ. ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2) ಪಾಸ್‌ಬುಕ್ ಜೆರಾಕ್ಸ್ ಪ್ರತಿ ಲಗತ್ತಿಸುವಾಗ Account Number ಮತ್ತು IFSC Code ಸ್ಪಷ್ಟವಾಗಿ ಕಾಣುವಂತಿರಬೇಕು. ತಪ್ಪಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3) SSLC ಮತ್ತು PUC ಅಂಕಪಟ್ಟಿಯಲ್ಲಿನ ವಿವರಗಳು ಸ್ಪಷ್ಟವಾಗಿ ಕಾಣುವಂತಿರಬೇಕು. ತಪ್ಪಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

4) ಪದವಿ, ಸ್ನಾತಕೋತ್ತರ ಮತ್ತು ಇಂಜೀನಿಯರಿಂಗ್ & ಮೆಡಿಕಲ್ ವಿದ್ಯಾರ್ಥಿಗಳ ಅಂಕಪಟ್ಟಿಗಳ ವಿವರಗಳು ಸ್ಪಷ್ಟವಾಗಿ ಕಾಣುವಂತಿರಬೇಕು ಮತ್ತು ಹಿಂದಿನ ಎರಡು ಸೆಮಿಸ್ಟರ್‌ಗಳ ಅಂಕಪಟ್ಟಿಯನ್ನು ಕಡ್ಡಾಯವಾಗಿ ಅಪ್‌ಲೋಡ್ ಮಾಡಬೇಕು. ತಪ್ಪಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

5) ವಿದ್ಯಾರ್ಥಿ, ತಂದೆ, ತಾಯಿ ಈ ಮೂರು ಜನರ ಆಧಾರ್ ಕಾರ್ಡ್ ಕಡ್ಡಾಯವಾಗಿ ಅಪ್‌ಲೋಡ್ ಮಾಡಬೇಕು. ಆಧಾರ್ ಸಂಖ್ಯೆ ತಪ್ಪಾಗಿ ನಮೂದಿಸಿದಲ್ಲಿ ಅಥವಾ ತಪ್ಪಾಗಿ ಪಿ.ಡಿ.ಎಫ್. ಅಪ್‌ಲೋಡ್ ಮಾಡಿದಲ್ಲಿ ಅಂತಹ ಅರ್ಜಿಯನ್ನು ತಿರಸ್ಕರಿಸಲಾಗುವುದು.

6) ತಂದೆ ಅಥವಾ ತಾಯಿ ಮರಣ ಹೊಂದಿದ್ದಲ್ಲಿ, ಅವರ ಮರಣ ಪ್ರಮಾಣ ಪತ್ರ ಅಪ್‌ಲೋಡ್ ಮಾಡಬೇಕು. ತಪ್ಪಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

# ಕರ್ನಾಟಕ ಸರ್ಕಾರ

## ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ, ಯಶವಂತಪುರ, ಬೆಂಗಳೂರು

### ಪತ್ರಿಕಾ ಪ್ರಕಟಣೆ

ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ವಂತಿಕೆ ಪಾವತಿಸುವ ಸಂಘಟಿತ ಕಾರ್ಮಿಕರ ಮಕ್ಕಳಿಂದ **(ಪ್ರೌಢ ಶಾಲೆಯಿಂದ ಸ್ನಾತಕೋತ್ತರ ಪದವಿಯವರೆಗೆ ಹಾಗೂ ವೈಧ್ಯಕೀಯ/ ಇಂಜಿನಿಯರಿಂಗ್‌ನಲ್ಲಿ ವ್ಯಾಸಂಗ ಮಾಡುತ್ತಿರುವವರಿಗೆ)** 2024-25ನೇ ಸಾಲಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯಕ್ಕೆ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 31-01-2025 ಕಾರ್ಮಿಕನ ಮಾಸಿಕ ವೇತನ 35,000/- ರೂ.ಗಿಂತ ಮೀರಿರಬಾರದು. (ಒಂದು ಕುಟುಂಬದಲ್ಲಿ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು)

ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಬಯಸುವ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ವೆಬ್ ಸೈಟ್ www.klwbapps.karnataka.gov.in ಅರ್ಜಿ ಸಲ್ಲಿಸಬಹುದಾಗಿರುತ್ತದೆ. (ಅರ್ಜಿ ಸಲ್ಲಿಸಲು ವಿದ್ಯಾರ್ಥಿಯು ಹಿಂದಿನ ವರ್ಷದಲ್ಲಿ ಸಾಮಾನ್ಯ ವರ್ಗ ಶೇ.50 ಪ.ಜಾ/ಪ.ಪಂ.45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು)

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ, ಕಾರ್ಮಿಕ ಕಲ್ಯಾಣ ಭವನ, ನಂ.48, 1ನೇ & 2ನೇ ಮಹಡಿ, ಮತ್ತಿಕೆರೆ ಮುಖ್ಯರಸ್ತೆ, ಯಶವಂತಪುರ, ಬೆಂಗಳೂರು-560022. ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ: 080-23475188, 8277291175, 8277120505, 9141585402, 9141602562ಗೆ ಮೂಲಕ ಸಂಪರ್ಕಿಸಬಹುದಾಗಿದೆ.

ಕಲ್ಯಾಣ ಆಯುಕ್ತರು
ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ,
ಕಾರ್ಮಿಕ ಕಲ್ಯಾಣ ಭವನ, ನಂ.48, 1ನೇ & 2ನೇ ಮಹಡಿ,
ಮತ್ತಿಕೆರೆ ಮುಖ್ಯರಸ್ತೆ, ಯಶವಂತಪುರ, ಬೆಂಗಳೂರು-560022

## GOVERNMENT OF KARNATAKA

## KARNATAKA LABOUR WELFARE BOARD, YESHWANTHPUR, BANGALURU

## PRESS NOTE

The Karnataka Labour Welfare Board, Bengaluru invites Online application from the eligible Students Studying in (High school to Post Graduation and also Engineering and Medical) of organized Sector workers who are working in firms/factories and Shop & Establishments for education assistance for the year 2024-2025. Eligible students can apply through online before 31-01-2025.

Parents monthly income should not exceed Rs. 35,000/- per month and those who are paying contribution to the Karnataka Welfare Fund are eligible to apply online. The students who have passed in the previous examination with 50% for General category and 45% for SC/ST category are eligible.

Eligible students can apply through online from Labour Welfare Board Website, www.klwbapps.karnataka.gov.in. For more details contact at Karnataka Labour Welfare Board, No, 48, 2nd Floor, Mathikere Main Road, Yeshwanthpur, Bengaluru-560022. Phone No: 080-23475188, 8277291175, 8277120505, 9141585402, 9141602562.

Welfare Commissioner.
Karnataka Labour Welfare Board
Karmika Kalyana Bhavan, No 48
2nd Floor, Mathikere Main road,
Yeshwanthpur, Bengaluru-22